ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೯**

ಒಟ್ಟು ಪ್ರಶ್ನೆಗಳು – ೧೫

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ ೨೮ನೇ ಮಾರ್ಚ್, ೨೦೧೬**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೭. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಅನುದಾನ ಹಂಚಿಕೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೧ (೧೧೩೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಸರ್ಕಾರವು ಹಲವು ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ಆ ಕಾರ್ಯಕ್ರಮಗಳು ಯಾವುವು ; ಸದರಿ ಕಾರ್ಯಕ್ರಮಗಳಿಗೆ ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ಮೀಸಲಿಟ್ಟ ಹಣ ಎಷ್ಟು ; ಖರ್ಚಾದ ಮೊತ್ತ ಎಷ್ಟು ? (ವರ್ಷವಾರು, ಕಾರ್ಯಕ್ರಮವಾರು ವಿವರ ನೀಡುವುದು)

## ಆರ್ಯ ವೈಶ್ಯ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೨ (೧೦೧೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆರ್ಯ ವೈಶ್ಯ ಸಮಾಜದವರನ್ನು ಹಿಂದುಳಿದ ವರ್ಗದ ಜಾತಿಗೆ ಸೇರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಆ) ಇಲ್ಲದಿದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೂಡಲೇ ಹಿಂದುಳಿದ ವರ್ಗಕ್ಕೆ ಸೇರಿಸಲು ಕೈಗೊಳ್ಳುವ ಕ್ರಮವೇನು ?

## ಚಾಲನಾ ಸಿಬ್ಬಂದಿಗಳನ್ನು ಆಯ್ಕೆಪಟ್ಟಿಗನುಸಾರವಾಗಿ ನೇಮಕ ಮಾಡುವ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೩ (೧೦೩೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೩-೦೪ನೇ ಸಾಲಿನಲ್ಲಿ BMTC/KSRTC ಚಾಲಕ, ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ರೋಸ್ಟರ್ ಅನ್ವಯ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ;

(ಆ) ಮಾಡಿಕೊಂಡಿದ್ದಲ್ಲಿ, ಸದರಿ ಪಟ್ಟಿಯಲ್ಲಿ ಹೆಚ್ಚುವರಿಯಾಗಿ ಪ್ರಕಟವಾದಂತಹ ಸುಮಾರು ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕರನ್ನು ಆಯ್ಕೆಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೆಚ್ಚುವರಿಯಾಗಿ ಪ್ರಕಟಿಸಲಾದ ಚಾಲಕ, ಚಾಲಕ–ಕಂ–ನಿರ್ವಾಹಕ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

**ಎ.ಪಿ.ಎಲ್. ಕಾರ್ಡ್‌ದಾರರಿಗೂ ಅನ್ನಭಾಗ್ಯ ಕಲ್ಪಿಸುವ ಬಗ್ಗೆ**

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೪ (೧೦೭೮) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಡತನ ರೇಖೆಗಿಂತ ಮೇಲ್ಪಟ್ಟವರು ಎಂದು ವರ್ಗೀಕರಿಸಲ್ಪಟ್ಟ ಅನೇಕರು ಕೆಳಗಿನ ಹಂತದಲ್ಲಿನ ಜನರಂತೆಯೇ ಇಂದಿನ ದಿನಮಾನಗಳಲ್ಲಿ ದಿನನಿತ್ಯದ ವೆಚ್ಚ ಭರಿಸಲು ಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಎ.ಪಿ.ಎಲ್. ಕಾರ್ಡ್ ಹೊಂದಿರುವ ವರ್ಗದಲ್ಲಿನ ಕೆಳವರ್ಗದವರಿಗೂ ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಪ್ರತಿ ಕಿಲೋಗ್ರಾಂಗೆ ರೂ. ೫.೦೦ರಂತೆ ಅಕ್ಕಿ ಸರಬರಾಜು ಮಾಡಲಾಗುವುದೇ ?

**ಬೆಂಗಳೂರು ಮಹಾನಗರ ವ್ಯಾಪ್ತಿಯ ಆರ್.ಟಿ.ಓ. ಕಛೇರಿಗಳ ಬಗ್ಗೆ**

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೫ (೧೦೮೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಬರುವ ಆರ್.ಟಿ.ಓ. ಕಛೇರಿಗಳು ಎಷ್ಟು ; ಅವು ಯಾವುವು ;

(ಆ) ೨೦೧೪–೧೫ ಹಾಗೂ ೨೦೧೫–೧೬ರ (ಫೆಬ್ರವರಿ ವರೆಗೆ) ವರೆವಿಗೂ ನೋಂದಣಿಯಾದ ಹೊಸ ವಾಹನಗಳ ಸಂಖ್ಯೆ ಎಷ್ಟು ; ಹೊಸ ವಾಹನಗಳಿಂದ ಸಂಗ್ರಹವಾಗಿರುವ ರೋಡ್‌ಟ್ಯಾಕ್ಸ್ ಹಾಗೂ ಇತರ ಬಾಬ್ತಿನಿಂದ ಸರ್ಕಾರಕ್ಕೆ ಬಂದಿರುವ ವರಮಾನ ಎಷ್ಟು ;

(ಇ) ಪ್ರತಿ ವರ್ಷ ಹಳೆ ವಾಹನಗಳ ಮಾರಾಟವಾದಾಗ ಮಾಲೀಕತ್ವದ ಬದಲಾವಣೆಯಾದಾಗ ವಾಹನಕ್ಕೆ ಸಂಬಂಧಪಟ್ಟ ದಾಖಲೆಗಳು ಅಥವಾ ಇತರೆ ಕಾರಣಗಳಿಂದ ಬಂದ ವರಮಾನವೆಷ್ಟು ;

(ಈ) ೨೦೧೮-೧೯ನೇ ಸಾಲಿನಲ್ಲಿ ವಾಹನಗಳ ತಪಾಸಣೆ ಮಾಡಿ ಹಾಕಿರುವ ದಂಡವೆಷ್ಟು ; ದಂಡ ಮತ್ತು ಇನ್ನಿತರೆ ಕಾರಣಗಳಿಂದ ಸಂಗ್ರಹಿಸಲಾದ ಶುಲ್ಕ ಎಷ್ಟು ?

## ರಾಜ್ಯದಲ್ಲಿ ಬಾಲ್ಯವಿವಾಹ ಪ್ರಕರಣಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೨೬ (೧೦೩೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿವೆ ;

(ಆ) ಕಾನೂನಿನಲ್ಲಿ ಜೈಲುವಾಸ ಹಾಗೂ ದಂಡ ವಿಧಿಸುವ ಶಿಕ್ಷೆ ಇದ್ದರೂ, ಈ ಅನಿಷ್ಟ ಪದ್ಧತಿ ಮುಂದುವರೆಯುತ್ತಿರುವುದಕ್ಕೆ ಕಾರಣಗಳೇನು ; ಇದರ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸಾಮೂಹಿಕ ವಿವಾಹಗಳಲ್ಲೇ ಹೆಚ್ಚಿನ ಪ್ರಮಾಣದಲ್ಲಿ ಬಾಲ್ಯ ವಿವಾಹಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರಾಯೋಜಿಸಿದ ಕಾರ್ಯಕ್ರಮದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೭ (೧೦೨೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮-೧೯ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರಾಯೋಜಿಸಿದ ಕಾರ್ಯಕ್ರಮಗಳು ಎಷ್ಟು ;

(ಆ) ಸಂಸ್ಥೆಗಳಿಗೆ ಕಾರ್ಯಕ್ರಮಗಳನ್ನು ಪ್ರಾಯೋಜಿಸಲು ಆದೇಶ ನೀಡಿ, ಕಾರ್ಯಕ್ರಮಗಳು ನಡೆದಿದ್ದರೂ, ಅವರಿಗೆ ಅನುದಾನ ನೀಡದ ಪ್ರಕರಣಗಳು ಎಷ್ಟು ;

(ಇ) ಯಾವ ಯಾವ ಸಂಸ್ಥೆಗಳಿಗೆ ಅನುದಾನ ಬಾಕಿ ಇದೆ ?

## ಚಿತ್ರದುರ್ಗದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆ

**ಶ್ರೀ ಜಿ. ರಘುಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೮ (೧೦೩೪) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಗೆ ಮಂಜೂರಾಗಿರುವ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಮಾಹಿತಿ ಒದಗಿಸುವುದು)

(ಆ) ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜು ಕಾರ್ಯ ಚಟುವಟಿಕೆ ಆರಂಭಗೊಳಿಸಲು ನಿಗದಿಪಡಿಸಲಾಗಿರುವ ಕಾಲಾವಧಿ ಎಷ್ಟು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಪ್ರವೇಶ ಕಲ್ಪಿಸಲು ಇರುವ ಮಾನದಂಡದ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೨೯ (೧೦೪೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಪ್ರವೇಶ ಕಲ್ಪಿಸಲು ಇರುವ ಮಾನದಂಡಗಳೇನು ;

(ಆ) ಭರ್ತಿಯಾಗದೇ ಉಳಿದಿರುವ ಸ್ನಾತಕೋತ್ತರ ಪ್ರವೇಶಾತಿಗಳನ್ನು ಯಾವ ರೀತಿಯಲ್ಲಿ ಮರುಹಂಚಿಕೆ ಮಾಡಲಾಗುತ್ತಿದೆ ;

(ಇ) ವಿವಿಧ ಕೋಟಾಗಳಲ್ಲಿ ಕೊನೆಯ ದಿನಾಂಕದ ಮೊದಲೇ ಬಾಕಿ ಉಳಿದಿರುವ ಪ್ರವೇಶಾತಿಗಳನ್ನು ಮರುಹಂಚಿಕೆ ಮಾಡದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕುರಿತಾಗಿ ಸರ್ಕಾರ ಏನು ಕ್ರಮಕೈಗೊಂಡಿದೆ ?

## ರಾಮನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೦ (೧೦೦೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇರುವ ಒಟ್ಟು ಪ್ರಾಥಮಿಕ ಹಾಗೂ ತಾಲ್ಲೂಕು ಆರೋಗ್ಯ ಕೇಂದ್ರಗಳೆಷ್ಟು ; ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗ ಎಷ್ಟು ; (ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿನ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೧ (೯೭೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳು ಮತ್ತು ಜಿಲ್ಲಾ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರು, ಸಿಬ್ಬಂದಿಗಳ ಸಂಖ್ಯೆ ಎಷ್ಟು ;

ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಕೊಡಗು ಜಿಲ್ಲೆಯಲ್ಲಿನ ಆಸ್ಪತ್ರೆಗಳ ಉನ್ನತೀಕರಣಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡ ಕ್ರಮಗಳೇನು ; ಬಿಡುಗಡೆಯಾದ ಅನುದಾನ ಮತ್ತು ಖರ್ಚು ಮಾಡಲಾದ ಹಣವೆಷ್ಟು ? (ಕಾಮಗಾರಿವಾರು ವಿವರ ಒದಗಿಸುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩.೨ (೧೦೪೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಪಿ.ಯು.ಸಿ. ಮತ್ತು ಅಂತಿಮ ಪದವಿ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಪಾಸಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಥಮ ದರ್ಜೆಯಲ್ಲಿ ಪಾಸಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರೋತ್ಸಾಹ ಧನ ಕೊಡುವ ಯೋಜನೆ ಇದೆಯೇ ; ಇದ್ದಲ್ಲಿ, ಪ್ರೋತ್ಸಾಹದ ಮೊಬಲಗು ಎಷ್ಟು ; ಇದುವರೆವಿಗೂ ಈ ಯೋಜನೆಯಲ್ಲಿ ನೀಡಿರುವ ಮೊಬಲಗು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿದೇಶಗಳಲ್ಲಿ ಉನ್ನತ ವ್ಯಾಸಂಗಕ್ಕೆ ತೆರಳಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಸರ್ಕಾರದಿಂದ ಆ ವಿದ್ಯಾರ್ಥಿಗಳಿಗೆ ನೀಡಿರುವ ಶುಲ್ಕದ ಮೊತ್ತ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆ, ಬೈಲಹೊಂಗಲ ನಗರದಲ್ಲಿ ಮಹಿಳಾ ಹಾಸ್ಟೆಲ್ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೩೩ (೧೦೭೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ನಗರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೈಲಹೊಂಗಲ ನಗರದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು, ಮೂರು ಖಾಸಗಿ ಪದವಿ ಕಾಲೇಜು ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೈಲಹೊಂಗಲ ಸಮೀಪದಲ್ಲಿಯೇ ಇರುವ ಬೈಲವಾಡ ವಕ್ಕುಂದ ಮುರಗೋಡ ಗ್ರಾಮಗಳಲ್ಲಿ ಪದವಿ ಪೂರ್ವ ಕಾಲೇಜುಗಳು ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೈಲಹೊಂಗಲ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಪದವಿ ಕಾಲೇಜು ವಿದ್ಯಾರ್ಥಿನಿಯರಿಗೆ ಹಾಸ್ಟಲ್ ಸೌಲಭ್ಯ ಇಲ್ಲದೆ ಇರುವುದರಿಂದ ವಿದ್ಯಾರ್ಥಿನಿಯರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವ ದೃಷ್ಟಿಯಿಂದ ಬೈಲಹೊಂಗಲ ನಗರದಲ್ಲಿ ಮಹಿಳಾ ಹಾಸ್ಟೆಲ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಡಯಾಲಿಸಿಸ್ ಕೇಂದ್ರಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೪ (೯೮೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ತಾಲ್ಲೂಕು/ವಿಧಾನಸಭಾ ಕ್ಷೇತ್ರಗಳಲ್ಲಿ ಡಯಾಲಿಸಿಸ್ ಕೇಂದ್ರಗಳು ಇಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಡಯಾಲಿಸಿಸ್ ಕೆಂದ್ರಗಳು ಇಲ್ಲದಿರುವ ತಾಲ್ಲೂಕುಗಳು/ವಿಧಾನಸಭಾ ಕ್ಷೇತ್ರಗಳು ಯಾವುವು ;

(ಆ) ಕಳೆದ ೨ ವರ್ಷಗಳಲ್ಲಿ ಸರ್ಕಾರ ಎಷ್ಟು ಡಯಾಲಿಸಿಸ್ ಕೇಂದ್ರಗಳನ್ನು ತೆರೆದಿದೆ ; ಇದಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಲ್ಲಾ ತಾಲ್ಲೂಕು/ವಿಧಾನಸಭಾ ಕ್ಷೇತ್ರಗಳಲ್ಲಿ ಸರ್ಕಾರದ ವತಿಯಿಂದ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೫ (೧೦೮೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ;

(ಆ) ಸದರಿ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಅಂಗನವಾಡಿ ಕೇಂದ್ರಗಳನ್ನು ಉತ್ತಮಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 1098 - ಪಿ5